ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 06-07-2017

# ಪತ್ರಿಕಾ ಆಮಂತ್ರಣ

1. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿ ವತಿಯಿಂದ ಚಿಕ್ಕಬಾಣಾವರ, ನಾಗಸಂದ್ರ ಹಾಗೂ ರಾಜಾ ಕೆನಾಲ್‌ನಲ್ಲಿ ಹೊಸದಾಗಿ ನಿರ್ಮಿಸಿರುವ ಒಟ್ಟು 65 ಎಂ.ಎಲ್.ಡಿ. ಸಾಮರ್ಥ್ಯದ ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳ ಲೋಕಾರ್ಪಣಾ ಸಮಾರಂಭ.

   <u>ಉದ್ಘಾಟನೆ :</u>

   ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ

   <u>ಘನ ಉಪಸ್ಥಿತಿ:</u>

   **ಘನತೆವೆತ್ತ ಕೆಂಜಿ ಇರಾಮಟ್ಸು, ರಾಯಭಾರಿ, ಎಂಬೆಸಿ ಆಫ್ ಜಪಾನ್.**

   **<u>ಅಧ್ಯಕ್ಷತೆ:</u>**

   **ಬಿ. ಎ. ಬಸವರಾಜು, ಶಾಸಕರು, ಕೆ.ಆರ್. ಪುರಂ ವಿಧಾನಸಭಾ ಕ್ಷೇತ್ರ.**

   **ದಿನಾಂಕ: 07-07-2017, ಶುಕ್ರವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ.**

   **ಸ್ಥಳ: ರಾಜಾಕೆನಾಲ್ ಎಸ್‌ಟಿಪಿ ಆವರಣ, ಬೆಂಗಳೂರು ಜಲಮಂಡಲಿ, ಫುಡ್ ವರ್ಲ್ಡ್ ಎದುರು, ಗೆದ್ದಲಹಳ್ಳಿ, ಕೊತ್ತನೂರು, ಬೆಂಗಳೂರು.**

2. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು 2017 ರ ಸಂವಿಧಾನದ 123 ನೇ ತಿದ್ದುಪಡಿ ಮಸೂದೆ ಕುರಿತ ಸಾಧಕ ಬಾಧಕಗಳ ಚರ್ಚೆ ನಡೆಸಲು ಸಭೆ:

   ಹೆಚ್. ಕಾಂತರಾಜ, ಅಧ್ಯಕ್ಷರು, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ.

   **ದಿನಾಂಕ: 07-07-2017, ಶುಕ್ರವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ.**

   **ಸ್ಥಳ: ಹೋಟೆಲ್ ಕ್ಯಾಪಿಟಲ್, ರಾಜಭವನ ರಸ್ತೆ, ಬೆಂಗಳೂರು.**

3. ಸಹಕಾರ ಇಲಾಖೆ ವತಿಯಿಂದ ಶಿದ್ಧನಗೌಡ ಸಂಣರಾಮನಗೌಡ ಪಾಟೀಲ ಸಹಕಾರ ಸೌಧ ಕಟ್ಟಡದ ಉದ್ಘಾಟನಾ ಸಮಾರಂಭ.

ಉದ್ಘಾಟನೆ :

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ

**ಅಧ್ಯಕ್ಷತೆ:**

**ಡಾ. ಸಿ.ಎನ್. ಅಶ್ವಥನಾರಾಯಣ್, ವಿಧಾನಸಭಾ ಸದಸ್ಯರು,**
**ಮಲ್ಲೇಶ್ವರಂ ಕ್ಷೇತ್ರ, ಬೆಂಗಳೂರು.**

**ದಿನಾಂಕ: 07-07-2017, ಶುಕ್ರವಾರ, ಸಮಯ: ಬೆಳಿಗ್ಗೆ 12-30 ಗಂಟೆಗೆ.**

**ಸ್ಥಳ: ಸಹಕಾರ ಸೌಧದ ಕಟ್ಟಡದ ಆವರಣ, 8ನೇ ಅಡ್ಡರಸ್ತೆ, ಮಾರ್ಗೋಸಾ ರಸ್ತೆ, ಮಲ್ಲೇಶ್ವರಂ, ಬೆಂಗಳೂರು- 560 003.**

**4. ಪತ್ರಿಕಾಗೋಷ್ಠಿ:**

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಚಟುವಟಿಕೆಗಳ ವರದಿಯನ್ನು ಮಂಡಿಸುವ ಪ್ರಯುಕ್ತ

**ಅಧ್ಯಕ್ಷತೆ:**

ಗೌರವಾನ್ವಿತ ಕುಲಪತಿಗಳು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ

**ದಿನಾಂಕ: 07-07-2017, ಶುಕ್ರವಾರ, ಸಮಯ: ಬೆಳಿಗ್ಗೆ 12-45 ಗಂಟೆಗೆ.**

**ಸ್ಥಳ: ಬೋರ್ಡ್ ರೂಮ್, ಮೊದಲನೇ ಮಹಡಿ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ "ಟಿ" ಬ್ಲಾಕ್, ಜಯನಗರ, ಬೆಂಗಳೂರು – 560 004.**

**ಸೂಚನೆ: ಮಾಧ್ಯಮದವರನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 11.45 ಗಂಟೆಗೆ ಕಬ್ಬನ್ ಉದ್ಯಾನದಲ್ಲಿರುವ ಪ್ರೆಸ್ ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.**

**5. ಪತ್ರಿಕಾಗೋಷ್ಠಿ:**

ಪ್ರೊ. ಎಸ್.ಜಿ. ಸಿದ್ಧರಾಮಯ್ಯ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅವರಿಂದ ಕನ್ನಡ ಭಾಷೆಯ ಅನುಷ್ಠಾನ ಪ್ರಗತಿ ಪರಿಶೀಲನೆ:

ಪರಿಶೀಲನೆ ಇಲಾಖೆ:
ಸ್ಥಳ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಕಚೇರಿ , ಉನ್ನತ ಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು – 560 001.

ದಿನಾಂಕ: 7-7-2017, ಶುಕ್ರವಾರ, ಸಮಯ : ಮಧ್ಯಾಹ್ನ 3.00 ಗಂಟೆಗೆ

## ಪತ್ರಿಕಾ ಪ್ರಕಟಣೆ

# ಜುಲೈ 7 ರಂದು
# ಸಂವಿಧಾನದ 123ನೇ ತಿದ್ದುಪಡಿ ಮಸೂದೆ ಕುರಿತು ಚರ್ಚೆ

**ಬೆಂಗಳೂರು, ಜುಲೈ 6 (ಕರ್ನಾಟಕ ವಾರ್ತೆ)**

**ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಂವಿಧಾನದ 123 ನೇ ತಿದ್ದುಪಡಿ ಮಸೂದೆ ಕುರಿತ ಸಾಧಕ ಬಾಧಕಗಳ ಚರ್ಚೆ ನಡೆಸಲು ಜುಲೈ 7 ರಂದು ಬೆಳಿಗ್ಗೆ 11.00 ಗಂಟೆಗೆ ಹೋಟೆಲ್ ಕ್ಯಾಪಿಟಲ್‌ನಲ್ಲಿ ಸಭೆ ಕರೆಯಲಾಗಿದೆ ಎಂದು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಹೆಚ್. ಕಾಂತರಾಜ ಅವರು ತಿಳಿಸಿದರು.**

**ಅವರು ಇಂದು ತಮ್ಮ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಮಾತನಾಡಿದರು.**

**1993 ರಲ್ಲಿ ರಾಜ್ಯ ಹಿಂದುಳಿದ ವರ್ಗಗಳ ಕಾಯ್ದೆ ಜಾರಿಗೆ ಬಂದಿತು. ಈ ಕಾಯ್ದೆಯಲ್ಲಿ ಮೀಸಲಾತಿ ನೀಡುವ ಕುರಿತು ಯಾವುದೇ ಅಡೆತಡೆಯಿರಲಿಲ್ಲ. ಈಗ ಸಂವಿಧಾನವು ತಂದಿರುವ 123 ನೇ ತಿದ್ದುಪಡಿಯಿಂದ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸಂವಿಧಾನ ಸ್ಥಾನಮಾನಕ್ಕೆ ಧಕ್ಕೆ ಉಂಟಾಗಲಿದೆ. ರಾಜ್ಯ ಹಿಂದುಳಿದ ವರ್ಗಗಳಿಗೆ ನೀಡುತ್ತಿರುವ ಮೀಸಲಾತಿ ಹಾಗೂ ಇತರೆ ಸರ್ಕಾರಿ ಸವಲತ್ತುಗಳನ್ನು ನೀಡುವ ಹಕ್ಕನ್ನು ಮೊಟಕುಗೊಳಿಸಲಾಗುತ್ತಿದೆ. ರಾಜ್ಯದ ಸಂವಿಧಾನಿಕ ಹಕ್ಕುಗಳು ಕೇಂದ್ರದ ಕೈಯಲ್ಲಿ ಕೇಂದ್ರೀಕೃತವಾಗುತ್ತದೆ ಎಂದರು.**

**ದಕ್ಷಿಣ ಭಾರತದ ರಾಜ್ಯಗಳಲ್ಲಿ 90 ವರ್ಷಗಳಿಗೂ ಮೀರಿ ನೀಡುತ್ತಿರುವ ಮೀಸಲಾತಿ ವ್ಯವಸ್ಥೆಯಲ್ಲಿ ಯಾವುದೇ ಲೋಪ ಕಂಡುಬಂದಿಲ್ಲ. ಮೀಸಲಾತಿ ವ್ಯವಸ್ಥೆ ಅತ್ಯಂತ ಪರಿಣಾಮಕಾರಿಯಾಗಿ ನಡೆಯುತ್ತಿದೆ. ಅದನ್ನು ಬದಲಿಸಿ ಕೇಂದ್ರ ಸರ್ಕಾರವೇ ರಾಜ್ಯಗಳಿಗೆ ಸಂಬಂಧಿಸಿದ ಮೀಸಲಾತಿ ಪಟ್ಟಿಗಳನ್ನು ನಿರ್ಧರಿಸುವುದರಿಂದ ಹಿಂದುಳಿದ ವರ್ಗಗಳ ಹಿತಾಸಕ್ತಿಗೆ ಧಕ್ಕೆಯಾಗುತ್ತದೆ. ಹಿಂದುಳಿದ ವರ್ಗದವರನ್ನು ಗುರುತಿಸಿ ಅವರಿಗೆ ಸೂಕ್ತ ಪರಿಹಾರ ಮಾರ್ಗಗಳನ್ನು ನಿರ್ಧರಿಸುವುದು ರಾಜ್ಯಗಳ ಕೆಲಸ. ಸಂವಿಧಾನ ತಂದಿರುವ 123 ನೇ ತಿದ್ದುಪಡಿ ರಾಜ್ಯ ಸ್ವಾಯತ್ತತೆಗೆ ಧಕ್ಕೆ ಉಂಟಾಗುತ್ತಿವೆ.**

**ಇದು ಸರ್ವೋಚ್ಚ ನ್ಯಾಯಾಲಯ ನೀಡಿರುವ (ಮಂಡಲ್ ತೀರ್ಪು) ತೀರ್ಪಿಗೂ ವಿರುದ್ಧವಾಗಿದೆ. ಈ ತಿದ್ದುಪಡಿಗೆ ಬದಲಾವಣೆ ಮಾಡದೇ ಇದ್ದರೆ ಆ ವರ್ಗಕ್ಕೆ ಹೆಚ್ಚಿನ ಸಮಸ್ಯೆ ಬರುತ್ತವೆ. ಈ ಮಸೂದೆ**

ಲೋಕಸಭೆಯಲ್ಲಿ ಒಪ್ಪಿಗೆ ಪಡೆದು ರಾಜ್ಯಸಭೆಗೆ ಸಲ್ಲಿಸಲಾಯಿತು. ರಾಜ್ಯಸಭೆ ಈ ಮಸೂದೆಯನ್ನು ಸೆಲೆಕ್ಟ್ ಕಮಿಟಿ ಮುಂದೆ ಇಡಲು ಶಿಫಾರಸ್ಸು ಮಾಡಿದ್ದು, ಅದರ ವರದಿ ಇನ್ನೂ ಬಂದಿಲ್ಲ ಎಂದವರು ತಿಳಿಸಿದರು.

ಈ ತಿದ್ದುಪಡಿಯ ಬಗ್ಗೆ ಹೆಚ್ಚು ಬೆಳಕನ್ನು ಚೆಲ್ಲಿ, ರಾಜ್ಯ ಹಾಗೂ ಹಿಂದುಳಿದ ವರ್ಗಗಳ ಹಿತಾಸಕ್ತಿಗೆ ಧಕ್ಕೆ ಬಾರದಂತೆ ಅಭಿಪ್ರಾಯ ಸಂಗ್ರಹಿಸಿ ನೀಡಲು ಹಾಗೂ ಚರ್ಚಿಸಲು ಜುಲೈ 7 ರಂದು ದಕ್ಷಿಣ ರಾಜ್ಯಗಳಾದ ಆಂಧ್ರಪ್ರದೇಶ, ಕೇರಳ, ತಮಿಳುನಾಡು, ಪುದುಚೇರಿ, ಕರ್ನಾಟಕ ಮತ್ತು ತೆಲಂಗಾಣ ರಾಜ್ಯಗಳ ಹಿಂದುಳಿದ ಆಯೋಗದ ಅಧ್ಯಕ್ಷರು, ಸದಸ್ಯರು, ಪ್ರಧಾನ ಕಾಯದರ್ಶಿಗಳು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಸಮಾಜ ಕಲ್ಯಾಣ ಸಚಿವರಾದ ಹೆಚ್. ಆಂಜನೇಯ ಅವರು ಸಹ ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಆಯೋಗದ ಇತರ ಸದಸ್ಯರು ಉಪಸ್ಥಿತರಿದ್ದರು.

ಎಸ್‌ಎಂ:ಕೆಎನ್‌ಕೆ:ಜಿಪಿಆರ್

## ಪತ್ರಿಕೋದ್ಯಮ ಪ್ರಶಸ್ತಿ ಪ್ರಕಟ

**ಬೆಂಗಳೂರು, ಜುಲೈ 6 (ಕರ್ನಾಟಕ ವಾರ್ತೆ)**

2016 ನೇ ಕ್ಯಾಲೆಂಡರ್ ವರ್ಷದ ಅಭಿವೃದ್ಧಿ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಯನ್ನು ಶ್ರೀ ಉಗಮ ಶ್ರೀನಿವಾಸ್, ಪ್ರಧಾನ ವರದಿಗಾರರು, ಕನ್ನಡ ಪ್ರಭ, ತುಮಕೂರು ಆಯ್ಕೆ ಮಾಡಲಾಗಿದೆ.

2016 ನೇ ಸಾಲಿನ ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗೆ ಕೊಪ್ಪಳದ ಶ್ರೀ ಆನಂದತೀರ್ಥ ಪ್ಯಾಟಿ ಅವರನ್ನು ಆಯ್ಕೆ ಮಾಡಲಾಗಿದೆ.

## ಶಾಸಕ ಕೆ.ಎನ್. ರಾಜಣ್ಣ ಅವರ ಅಧ್ಯಕ್ಷತೆಯಲ್ಲಿ ಖಾಸಗಿ ವೈದ್ಯಕೀಯ ಸಂಸ್ಥೆಗಳ ವಿಧೇಯಕದ ಜಂಟಿ ಪರಿಶೀಲನಾ ಸಮಿತಿಯ ಮೊದಲ ಸಭೆ

**ಬೆಂಗಳೂರು, ಜುಲೈ 6 (ಕರ್ನಾಟಕ ವಾರ್ತೆ)**

ಖಾಸಗಿ ವೈದ್ಯಕೀಯ ಆಸ್ಪತ್ರೆಗಳ ನಿಯಂತ್ರಣ ವಿಧೇಯಕ ಕುರಿತಂತೆ ವಿಧಾನ ಮಂಡಲದ ಜಂಟಿ ಪರಿಶೀಲನಾ ಸಮಿತಿಯ ಮೊದಲ ಸಭೆಯು ಶಾಸಜಕರು ಹಾಗೂ ಸಮಿತಿಯ ಅಧ್ಯಕ್ಷರೂ ಆದ ಕೆ.ಎನ್. ರಾಜಣ್ಣ ಅಧ್ಯಕ್ಷತೆಯಲ್ಲಿ ಇಂದು ನಡೆಯಿತು.

ವಿಧಾನಸೌಧದ ಸಮಿತಿಯ ಕೊಠಡಿಯಲ್ಲಿ ಇಂದು ನಡೆದ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಯಾವುದೇ ಖಾಸಗಿ ಆಸ್ಪತ್ರೆಗಳಿಗೆ ಅನಾನುಕೂಲ ಮಾಡುವ ಉದ್ದೇಶ ಸಮಿತಿಗಿಲ್ಲ ಎಂದು ಸ್ಪಷ್ಟಪಡಿಸಿದ ಅವರು **2017** ರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳಿ

(ತಿದ್ದುಪಡಿ) ವಿಧೇಯಕವನ್ನು ಸದನದಲ್ಲಿ ಚರ್ಚಿಸಿದ ನಂತರ ಸದಸ್ಯರು ಸ್ವಾಗತಿಸಿದ್ದಾರೆ. ಆದರೆ ಕೆಲವು ಸಣ್ಣ ಪುಟ್ಟ ಸಮಸ್ಯೆಗಳ ಬಗ್ಗೆ ಚರ್ಚೆಮಾಡಿ ರೋಗಿಗಳಿಗೆ ತೊಂದರೆಯಾಗುವುದನ್ನು ನಿವಾರಿಸಲು ಸಮಿತಿಯು ಪ್ರಾಮಾಣಿಕ ಪ್ರಯತ್ನ ಮಾಡುತ್ತದೆ ಎಂದು ಅವರು ತಿಳಿಸಿದರು.

2017 ರಲ್ಲಿ ಅಂಗೀಕಾರವಾದ ತಿದ್ದುಪಡಿ ಮಸೂದೆ ನಂತರ ಖಾಸಗಿ ಆಸ್ಪತ್ರೆಗಳ ಮೇಲೆ ತೆಗೆದುಕೊಂಡಿರುವ ಕ್ರಮದ ಬಗ್ಗೆ ವರದಿ ನೀಡುವಂತೆ ಸರ್ಕಾರಕ್ಕೆ ತಿಳಿಸಿರುವುದಾಗಿ ನುಡಿದ ಸಮಿತಿಯ ಅಧ್ಯಕ್ಷರು ಮುಂದಿನ ಸಭೆಯಲ್ಲಿ ಸಂಪೂರ್ಣ ಮಾಹಿತಿಯನ್ನು ಮಂಡಿಸಲಾಗುವುದು ಎಂದು ತಿಳಿಸಿದರು.

ಜಂಟಿ ಸದನ ಸಮಿತಿ ಮುಂದಿನ ಸಭೆಯು ಗುರುವಾರ ಮಧ್ಯಾಹ್ನ 3.00 ಗಂಟೆಗೆ ನಡೆಸಲಾಗುವುದು. ಆ ಸಂದರ್ಭದಲ್ಲಿ ಅಡ್ವೊಕೇಟ್ ಜನರಲ್ ಹಾಗೂ ಕಾನೂನು ಇಲಾಖೆ ಕಾರ್ಯದರ್ಶಿಗಳನ್ನು ಸಭೆಗೆ ಆಹ್ವಾನಿಸಲಾಗಿದ್ದು ಅವರ ಸಲಹೆ ಸೂಚನೆಗಳನ್ನು ಪಡೆದುಕೊಳ್ಳಲಾಗುವುದು ಎಂದು ತಿಳಿಸಿದ ಸಮಿತಿಯ ಅಧ್ಯಕ್ಷರು ಇಂದು ನಡೆದ ಜಂಟಿ ಸದನ ಸಮಿತಿ ಸಭೆಗೆ 19 ಸದಸ್ಯರ ಪೈಕಿ 15 ಸದಸ್ಯರು ಹಾಜರಿದ್ದರು ಎಂದರು.

ಎಸ್‌ಎಂ::ಜಿಪಿಆರ್.

## ಡೆಂಗ್ಯೂ, ಚಿಕನ್ ಗುನ್ಯಾ ತಡೆಗಟ್ಟಲು ಕ್ರಮ - ಸಚಿವ ರಮೇಶ್‌ಕುಮಾರ್

**ಬೆಂಗಳೂರು, ಜುಲೈ 6 (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿ ಡೆಂಗ್ಯೂ ಹಾಘೂ ಚಿಕನ್‌ಗುನ್ಯಾ ಹಾಗೂ ಇತರೆ ಸಾಂಕ್ರಾಮಿಕ ರೋಗಗಳು ಹೆಚ್ಚಾಗಲು ಪರಿಸರದಲ್ಲಿನ ವ್ಯತ್ಯಾಸ ಕಾರಣವಾಗಿದ್ದು, ಇವುಗಳ ನಿಯಂತ್ರಣಕ್ಕೆ ಈಗಾಗಲೇ ರಾಜ್ಯ ಸರ್ಕಾರ ಅಗ್ಯಕ್ರಮ ಕೈಗೊಂಡಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಕೆ.ಆರ್. ರಮೇಶ್‌ಕುಮಾರ್ ಅವರು ಹೇಳಿದರು.

ವಿಧಾನಸೌಧದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಸಚಿವರು ಇಲಾಖೆಯ ಆಯುಕ್ತರು ನಿನ್ನೆ ಜಿಲ್ಲಾಡಳಿತದ ಜೊತೆ ವೀಡಿಯೋ ಕಾನ್ಪರೆನ್ಸ್ ನಡೆಸಿದ್ದು, ಈ ಕಾಯಿಲೆಗಳ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅಗ್ರಹಿಸಿದ್ದಾರೆ ಎಂದು ಸಚಿವರು ತಿಳಿಸಿದರು.

ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಪ್ಲೇಟ್‌ಲೆಟ್‌ಗಳನ್ನು ಸಕಾಲಕ್ಕೆ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದ ಆರೋಗ್ಯ ಸಚಿವರು ಎಲ್ಲಾ ರೀತಿಯ ಜ್ವರಬಾಧೆಯು ಡೆಂಗ್ಯೂ ಎಂದು ತಾವೇ ಸರ್ಕಾರಕ್ಕೆ ಸಾರ್ವಜನಿಕರು ಬರಬಾರದು. ತಜ್ಞ ವೈದ್ಯರ ಬಳಿ ಪರೀಕ್ಷಿಸಿಕೊಳ್ಳಿ ಅಲ್ಲದೆ ಮತ್ತೊಬ್ಬ ವೈದ್ಯರ ಸಲಹೆಗಳನ್ನು ರೋಗಿಗಳ ಕುಟುಂಬದವರು ಪಡೆದು ನಿರ್ಧಾರಕ್ಕೆ ಬರುವುದು ಒಳಿತು ಎಂದು ಆರೋಗ್ಯ ಸಚಿವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಎಸ್‌ಎಂ::ಜಿಪಿಆರ್.

## ಮೇಕೆದಾಟು ಯೋಜನೆ ಕುರಿತು ಕೇಂದ್ರ ಜಲ ಆಯೋಗಕ್ಕೆ ವರದಿ ಸಲ್ಲಿಕೆ ; ಸಚಿವ ಎಂ.ಬಿ. ಪಾಟೀಲ್

**ಬೆಂಗಳೂರು, ಜುಲೈ 6 (ಕರ್ನಾಟಕ ವಾರ್ತೆ)**

ಮೇಕೆದಾಟು ಜಲ ಸಂಗ್ರಹಗಾರ ಯೋಜನೆ ಕುರಿತಂತೆ ರಾಜ್ಯ ಸರ್ಕಾರ ಸಿದ್ದಪಡಿಸಿರುವ ವಿಸ್ತೃತ ವರದಿಯನ್ನು ಕೇಂದ್ರ ಜಲ ಆಯೋಗಕ್ಕೆ ಸಲ್ಲಿಸಲಾಗಿದೆ ಎಂದು ಜಲ ಸಂಪನ್ಮೂಲ ಸಚಿವ ಎಂ.ಬಿ. ಪಾಟೀಲ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಪತ್ರಕರ್ತರನ್ನುದ್ದೇಶಿಸಿ ಮಾತನಾಡಿದ ಸಚಿವರು ಕಚೇರಿ ನ್ಯಾಯ ಮಂಡಳಿಯ ಐ ತೀರ್ಪಿನ ನಂತರ ನಮ್ಮ ಪಾಲಿನ ನೀರನ್ನು ಸದ್ಬಾಳಕೆ ಮಾಡಿಕೊಳಲ್ಲು ಯಾವುದೇ ಆಕ್ಷೇಪ ಇರುವುದಿಲ್ಲ. ಆದರೆ ತಮಿಳುನಾಡು ಸರ್ಕಾರ ಆಕ್ಷೇಪಗಳನ್ನು ಪ್ರಸ್ತಾಪಿಸುತ್ತಿದೆ. ಆದರೆ ನಮ್ಮ ಕಾನೂನು ತಜ್ಞರು ಈ ಕುರಿತಂತೆ ನ್ಯಾಯಾಲಯದ ಮುಂದೆ ಸಮರ್ಪಕವಾದ ವಾದ ಮಂಡಿಸುತ್ತಿದ್ದಾರೆ ಎಂದು ತಿಳಿಸಿದರು.

ಕೂಡಲಸಂಗಮದಲ್ಲಿ ದೆಹಲಿಯಲ್ಲಿರುವ ಅಕ್ಷರಧಾಮ ಮಾದರಿಯಲ್ಲಿಯೇ ಕೃಷ್ಣ ಜಲಭಾಗ್ಯ ನಿಗಮದ ಮೂಲಕ ಬಸವಣ್ಣ ಅವರ ಕುರಿತು ಅಂತರರಾಷ್ಟ್ರೀಯ ಮಟ್ಟದ ವಸ್ತು ಸಂಗ್ರಹಾಲಯವನ್ನು ಸುಮಾರು 94 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು ಎಂದು ತಿಳಿಸಿದ ಸಚಿವರು ಇಲ್ಲಿ ಬಸವಣ್ಣ ಅವರ ಕುರಿತ ಛಾಯಾಚಿತ್ರ-ಸಾಕ್ಷಾಚಿತ್ರ, ವಿಶ್ರಾಂತ ಗೃಹಗಳನ್ನು ನಿರ್ಮಿಸಲಾಗುವುದು ಎಂದರು.

ಈ ಕುರಿತಂತೆ ಅರ್ಕಾಪ್ ಸಂಸ್ಥೆ ವಿಸ್ತೃತ ವರದಿ ನೀಡಿದ್ದು ಶೀಘ್ರ ಅನುಮತಿ ನೀಡಿ ಡಿಸೆಂಬರ್ ಒಳಗೆ ಕಾಮಗಾರಿ ಆರಂಭಿಸಲಾಗುವುದು ಎಂದು ಜಲ ಸಂಪನ್ಮೂಲ ಸಚಿವ ಎಂ.ಬಿ. ಪಾಟೀಲ್ ತಿಳಿಸಿದರು.

ಎಸ್‌ಎಂ::ಜಿಪಿಆರ್.

## ಅಂತಿಮ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಜುಲೈ 6 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ಪೌರಾಡಳಿತ ಇಲಾಖೆಯ ಮಹಾನಗರಪಾಲಿಕೆಗಳಲ್ಲಿನ ತೋಟಗಾರಿಕೆ ಸಹಾಯಕರು 21 (18 + 03 ಹೈ.ಕ) ಹುದ್ದೆಗಳು ಮತ್ತು ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿನ ಗ್ರಂಥಪಾಲಕರು 02 (ಹೈ.ಕ) ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಜುಲೈ 3 ರಂದು ಆಯೋಗದ ವೆಬ್‌ಸೈಟ್ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜಿಪಿಆರ್

## ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವಿವಿಧ ವೃಂದಗಳ ಜೇಷ್ಠತಾ ಪಟ್ಟಿ ವೆಬ್‌ಸೈಟ್‌ನಲ್ಲಿ ಪ್ರಕಟ

**ಬೆಂಗಳೂರು, ಜುಲೈ 6 (ಕರ್ನಾಟಕ ವಾರ್ತೆ)**

**ಸರ್ವೋಚ್ಛ ನ್ಯಾಯಾಲಯವು ಸಿವಿಲ್ ಅಪೀಲು ಸಂ 2368/2011, ಶ್ರೀಮತಿ ಬಿ. ಕೆ. ಪವಿತ್ರ ಮತ್ತಿತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ದಿನಾಂಕ: 09-02-2017 ರಂದು ನೀಡಿರುವ ತೀರ್ಪಿನ ಹಿನ್ನಲೆಯಲ್ಲಿ ಹಾಗೂ ಸರ್ಕಾರದ ಆದೇಶ ಸಂ. ಸಿಆಸುಇ 182 ಎಸ್‌ಆರ್‌ಆರ್ 2011, ದಿನಾಂಕ: 06-05-2017 ರನ್ವಯ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಆಡಳಿತಾಧಿಕಾರಿ, ಅಧೀಕ್ಷಕ, ಪ್ರ.ದ.ಸ., ದ್ವಿ.ದ.ಸ., ಹಿರಿಯ ಬೆರಳಚ್ಚುಗಾರ, ಹಿರಿಯ ವಾಹನ ಚಾಲಕ, ಶೀಘ್ರಲಿಪಿಗಾರ, ಬೆರಳಚ್ಚುಗಾರ ಮತ್ತು ವಾಹನ ಚಾಲಕ ವೃಂದಗಳ ತಾತ್ಕಾಲಿಕ, ಪರಿಷ್ಕೃತ ಜೇಷ್ಠತಾ ಪಟ್ಟಿಗಳನ್ನು ಪರಿಷ್ಕರಿಸಿ ಇಲಾಖೆಯ "www.karnatakapubliclibrary.gov.in" ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಈ ಪತ್ರಿಕಾ ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗಾಗಿ ಆಕ್ಷೇಪಣೆ/ಸಲಹೆಗಳಿದ್ದಲ್ಲಿ ಮೇಲ್ಕಾಣಿಸಿದ ವಿಳಾಸದ ಇಲಾಖೆಯ ನಿರ್ದೇಶಕರ ಕಚೇರಿ ಸಲ್ಲಿಸಬಹುದಾಗಿದೆ ಎಂದು ಸಾರ್ವಜನಿಕ ಗ್ರಂಥಾಲಯ ಇಲಾಖೆ ಪ್ರಕಟಣೆ ತಿಳಿಸಿದೆ.**

ಎಸ್‌ಎಂ::ಜಿಪಿಆರ್.

# ನೇಮಕ

**ಬೆಂಗಳೂರು, ಜುಲೈ 6 (ಕರ್ನಾಟಕ ವಾರ್ತೆ)**

**ಶ್ರೀಮತಿ ಶುಭ ಕಲ್ಯಾಣ್, ಐ.ಎ.ಎಸ್. ಇವರನ್ನು ಸಹಾಯಕ ಆಯುಕ್ತರು, ಕೋಲಾರ ಉಪ ವಿಭಾಗಕ್ಕೆ ನೇಮಕ ಮಾಡಲಾಗಿದೆ.**